ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:04–11–2020ರ ನಡವಳಿಗಳು

ವಿಷಯದ ಸಂಖ್ಯೆ: 477/2020–21

ಪ್ರಸ್ತಾವನೆ :

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯವ್ಯಯದ 2020–21ನೇ ಸಾಲಿನ ಪೂಜ್ಯ ಉಪ ಮಹಾಪೌರರ ವಿವೇಚನಾದಡಿಯಲ್ಲಿ ಲೆಕ್ಕಶೀರ್ಷಿಕೆ ಪಿ–2178ರಡಿ Construction of Additional Class rooms and compound wall at Govt Higher primary school (Bangla school) at yelahanka old town in kempegowda ward No-01 ಎಂಬ ಕಾಮಗಾರಿಗೆ ಅಂದಾಜು ಮೊತ್ತ ರೂ. 300.00 ಲಕ್ಷಗಳಿಗೆ ಜಾಬ್ ಸಂಖ್ಯೆ 001–21–000003 ನೀಡಲಾಗಿರುತ್ತದೆ.

ಸದರಿ ಕಾಮಗಾರಿಯನ್ನು ಕೈಗೊಳ್ಳಲು ರೂ.300.00 ಲಕ್ಷಗಳಿಗೆ 2018–19ನೇ ಸಾಲಿನ ಲೋಕೋಪಯೋಗಿ ಇಲಾಖೆ ಮತ್ತು ಅನುಮೋದಿತ ದರಗಳ ದರಪಟ್ಟಿಯಂತೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿರುತ್ತದೆ.

ಸದರಿ ಕಾಮಗಾರಿಯನ್ನು ಸಾರ್ವಜನಿಕ ಸೇವಾ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿದ್ದರಿಂದ ಸಕ್ಷಮ ಪ್ರಾಧಿಕಾರದಿಂದ ಆಡಳಿತಾತ್ಮಕ ಮಂಜೂರಾತಿಯನ್ನು ನಿರೀಕ್ಷಿಸಿ ಕಾರ್ಯಪಾಲಕ ಅಭಿಯಂತರರು, ಯಲಹಂಕ ವಿಭಾಗ ರವರು ದಿನಾಂಕ: 03–09–2020 ರಂದು ಟೆಂಡರ್ ಆಹ್ವಾನಿಸಿರುತ್ತಾರೆ.

ಸದರಿ ಕಾಮಗಾರಿಯ ಟೆಂಡರ್‌ಗೆ ಸಂಬಂದಿಸಿದಂತೆ ತಾಂತ್ರಿಕ ಬಿಡ್‌ಅನ್ನು ದಿನಾಂಕ:21–09–020 ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಇಬ್ಬರು ಬಿಡ್‌ದಾರರಾದ 1) Sri BB Umesh (SMLP Asphalts) ಮತ್ತು 2) Sri Naveen Rao N (Nischal Constructions) ರವರು ಭಾಗವಹಿಸಿದ್ದು, ತಾಂತ್ರಿಕವಾಗಿ ಅರ್ಹರಾಗಿರುವ ಬಿಡ್ದುದಾರರ ಆರ್ಥಿಕ ಬಿಡ್ ಅನ್ನು ತೆರೆಯಲು ಮುಖ್ಯ ಅಭಿಯಂತರರು (ಯಲಹಂಕ ವಲಯ) ರವರು ಅನುಮೋದಿಸಿರುವಂತೆ ದಿನಾಂಕ:12–10–2020ರಂದು ಆರ್ಥಿಕ ಬಿಡ್ ಅನ್ನು ತೆರೆಯಲಾಗಿದ್ದು, ವಿವರಗಳು ಕೆಳಕಂಡಂತೆ ಇರುತ್ತದೆ.

ಕ್ರ ಸಂ	ಗುತ್ತಿಗೆದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ.	ಟೆಂಡರ್ ಗಿಟ್ಟ ಮೊತ್ತವನ್ನು 1–7–2020ರ ಪರಿಷ್ಕೃತ ದರಗಳಿಗೆ ಹೋಲಿಸಿದಾಗ.	ಗುತ್ತಿಗೆ ದಾರರು ನಮೂದಿ ಸಿರುವ ದರಗಳು	ಟೆಂಡರ್‌ಗಿಟ್ಟ ಮೊತ್ತಕ್ಕೆ ಹೊಲಿಸಿದಾಗ ಶೇಕಡವಾರು	ಷರಾ	ದರ ಸಂದಾನದ ನಂತರ ಗುತ್ತಿಗೆ ದಾರರು ನಮೂದಿ ಸಿರುವ ದರಗಳು
01	Sri BB Umesh (SMLP Asphalts)	2,49,95,363.75	2,49,95,363.75	2,74,59,193.26	(+) 9.86%	L-1	2,69,94,992.84 (+8.00%)
02	Sri Naveen Rao N (Nischal Constructions)			2,82,28,139.92	(+) 12.93%	L-2	-

ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿದೆ.

1. ಪ್ರಸ್ತಾಪಿತ ಕಾಮಗಾರಿಗಳ ಸ್ಥಳ ಪರಿವೀಕ್ಷಣೆ ಮಾಡಿ ಕಾಮಗಾರಿಯ ಅವಶ್ಯಕತೆ ಬಗ್ಗೆ ಹಾಗೂ ಸದರಿ ಕಾಮಗಾರಿಯನ್ನು ಪಾಲಿಕೆಯ ಹಿಂದಿನ ಆಯವ್ಯಯಗಳಲ್ಲಿ/ಅನುದಾನಗಳಲ್ಲಿ ಕೈಗೊಂಡಿಲ್ಲದೇ ಇರುವ ಮತ್ತು ಪುನರಾವರ್ತನೆಯಾಗದೇ ಇರುವುದನ್ನು ಖಚಿತ ಪಡಿಸಿಕೊಳ್ಳುವುದು.

2. ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಪೂರ್ವದಲ್ಲಿ, ಆಯುಕ್ತರವರ ಕಛೇರಿ ಆದೇಶ ಸಂಖ್ಯೆ:ಮುಲೆಅ/ಆಯವ್ಯಯ/2019-20/ಪಿಆರ್/11/2018-19 ದಿನಾಂಕ:12-06-2019 ಮತ್ತು ಆಯುಕ್ತರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ:ಬಿಬಿಎಂಪಿ/ಆ/ಪಿ.ಆರ್/ 5287/2019-20, ದಿನಾಂಕ:05-11-2019 ಮತ್ತು ಬಿಬಿಎಂಪಿ/ಆ/ಪಿ.ಆರ್/6166/2019-20 ದಿನಾಂಕ:13-12-2019 ರಲ್ಲಿನ ನಿರ್ದೇಶನಗಳನ್ನು / ಪ್ರಕ್ರಿಯೆಗಳನ್ನು ಅನುಸರಿಸತಕ್ಕದ್ದು.

3. ಕಾಮಗಾರಿಗೂ ಮುನ್ನ ಹಾಗೂ ನಂತರದ ಜಿ.ಪಿ.ಎಸ್.ಯುಳ್ಳ ಛಾಯಾ ಚಿತ್ರಗಳನ್ನು ಸಲ್ಲಿಸತಕ್ಕದ್ದು.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಕಂಡ ಅಂಶಗಳಿಗೆ ಅನುಮೋದನೆ ನೀಡಲು ಕೋರಿ ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಸಭೆಯ ಅಧಿಕಾರವನ್ನು ಚಲಾಯಿಸಿ ಸೂಕ್ತ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ವಿಶೇಷ ಆಯುಕ್ತರು (ಆಸ್ತಿಗಳು) ಹಾಗೂ ವಲಯ ಆಯುಕ್ತರು (ಯಲಹಂಕ) ರವರ ದಿನಾಂಕ: 21-10-2020 ರ ಟಿಪ್ಪಣಿ.

1. ಸದರಿ ಕಾಮಗಾರಿಯ ಅಂದಾಜು ಮೊತ್ತ ರೂ.300.00 ಲಕ್ಷಗಳಿಗೆ ವಾರ್ಡ್ ಮಟ್ಟದ ಕಾಮಗಾರಿ ಸ್ಥಾಯಿ ಸಮಿತಿಯಿಂದ ಆಡಳಿತಾತ್ಮಕ ಅನುಮೋದನೆಯನ್ನು ನಿರೀಕ್ಷಿಸಿ ಟೆಂಡರ್ ಅಹ್ವಾನಿಸಲಾಗಿರುವುದರಿಂದ, ಘಟನ್ನೋತ್ತರ ಆಡಳಿತಾತ್ಮಕ ಅನುಮೋದನೆ.

2. ಸದರಿ ಕಾಮಗಾರಿಯನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿರುವುದರಿಂದ ಗುತ್ತಿಗೆದಾರರಾದ Sri B.B. Umesh (S.M.L.P Asphalts) ರವರು ನಮೂದಿಸಿರುವ ದರ ಸಂದಾನದ ಮೊತ್ತವಾದ ರೂ.2,69,94,992.84ಗಳನ್ನು ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಬಂದಂತಹ ಶೇ.8.00% ರಷ್ಟು ಹೆಚ್ಚುವರಿ ದರಗಳ ಟೆಂಡರ್ ಪ್ರಿಮಿಯಂಗೆ (2018-19ನೇ ಸಾಲಿನ ಎಸ್.ಆರ್. ದರಪಟ್ಟಿಯಂತೆ) ಅನುಮೋದನೆ.

ತೀರ್ಮಾನ : ವಿಶೇಷ ಆಯುಕ್ತರು (ಆಸ್ತಿಗಳು) ಹಾಗೂ ವಲಯ ಆಯುಕ್ತರು (ಯಲಹಂಕ) ರವರ ದಿನಾಂಕ:21-10-2020 ರ ಟಿಪ್ಪಣಿಯನ್ನು ಒಪ್ಪಿದೆ.

(ಗೌರವ ಗುಪ್ತ)
ಆಡಳಿತಗಾರರು